ಶ್ರೀ ಪಿ. ಜಿ. ಆರ್. ಸಿಂಧ್ಯ (ಕನಕಪುರ) : ಮಾನ್ಯ ಅಧ್ಯಕ್ಷರೇ, ಈ ಸಪ್ಲಿಮೆಂಟರಿ ಬಜೆಟ್ ಬಗ್ಗೆ ನಾವು ಮಾತನಾಡಬೇಕಾಗುತ್ತದೆ. ವರ್ಲ್ಡ್ ಬ್ಯಾಂಕ್ ಟೀಮ್ ಅವರ ಜೊತೆ ಅದರ ಎಂ. ಡಿ. ಯವರು ಬಂದಿರುವುದರಿಂದ ಮಾನ್ಯ ಮುಖ್ಯಮಂತ್ರಿಗಳು ಹೋಗಬೇಕಾಗಿದೆ. ನಾನು ಈ ಬಗ್ಗೆ ಮಾತನಾಡುವುದನ್ನು ಕಾಯ್ದಿರಿಸಿದ್ದೇನೆ. ನಾವು ಮಾತನಾಡದಿದ್ದರೆ ವಿರೋಧ ಪಕ್ಷದವರು ಮಾತನಾಡಲಿಲ್ಲವೆನ್ನುವ ಬ್ಯಾಡ್ ಪ್ರಿಸಿಡೆಂಟ್ ಆಗುತ್ತದೆ. ಮಾನ್ಯ ಕರಡಿಸಂಗಣ್ಣನವರು ಮತ್ತು ಮಹಾದೇವಪ್ರಸಾದ್‌ರವರು ವಿಶೇಷವಾಗಿ ತುಂಗಭದ್ರಾ ಎಡದಂಡೆ ನಾಲೆ ಬಗ್ಗೆ ಹೇಳಿದರು. ಅದು ಆದಮೇಲೆ ಹೊಸ ಜಿಲ್ಲೆಗಳ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ಸ್ ಆಗುವುದರ ಬಗ್ಗೆ ನಮ್ಮ ಸರ್ಕಾರ ಇದ್ದಾಗ ಏನೂ ಮಾಡಲಿಕ್ಕೆ ಆಗಲಿಲ್ಲ ನೀವು ಏನಾದರೂ ಮಾಡಬೇಕೆನ್ನುವ ಮಾತನ್ನು ಹೇಳಿದರು. ಸಮಯದ ಅಭಾವದಿಂದ ಮಾನ್ಯ ಮುಖ್ಯಮಂತ್ರಿಯವರು ಉತ್ತರ ಹೇಳಲಿಲ್ಲವೆಂದು ನಾನು ಭಾವಿಸಿದ್ದೇನೆ. ಇವತ್ತು ನಾವು ಸಹಕಾರವನ್ನು ಕೊಡುತ್ತೇವೆ. ಇದರ ದುರುಪಯೋಗವನ್ನು ಬೇರೆ ಸಂದರ್ಭದಲ್ಲಿ ಆಡಳಿತ ಪಕ್ಷದವರು ಮಾಡಬಾರದೆಂದು ತಮ್ಮ ಮೂಲಕ ಸರ್ಕಾರಕ್ಕೆ ಮನವಿ ಮಾಡಿಕೊಳ್ಳುತ್ತೇನೆ.

ಅಧ್ಯಕ್ಷರು : ಒಳ್ಳೆಯದು, ಮಾಡುವುದಿಲ್ಲ ಮಾಡಿದಾಗ ನೋಡಿಕೊಳ್ಳೋಣ.

ಪ್ರಸ್ತಾವದ ಅಂಗೀಕಾರ

ಅಧ್ಯಕ್ಷರು : ಪ್ರಸ್ತಾವ ಹೀಗಿದೆ.

"ದಿನಾಂಕ : 31. 3. 2000 ದಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1, 2, 3, 4, 5, 6, 7, 8, 9, 10, 11, 12, 13, 15, 17, 18, 19, 20, 21, 22, 24, 25, 26, 27, 28, 29 30, 31, 32, 33, 34, 35, 36, 37, 38, 39, 40, 42, 44, 45, 47, 48, 51, 52, 53, 54, 55, 56, 57, 58, 61, 62, 63 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗನ್ನು ಸೇರಿ, ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರಿದ ಮೊತ್ತವನ್ನು ಈ ಸಭೆಯು ಮಂಜೂರು ಮಾಡುವುದು."

ಪ್ರಸ್ತಾವನ್ನು ಅಂಗೀಕರಿಲಾಯಿತು ಮತ್ತು ಬೇಡಿಕೆಗಳನ್ನು ಮಂಜೂರು ಮಾಡಲಾಯಿತು.

2. ಶಾಸನ ರಚನೆ

(i) <u>ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕ, 2000</u>

<u>ಮಂಡನೆಗೆ ಅನುಮತಿ ಕೋರಿಕೆ</u>

ಶ್ರೀ ಎಸ್. ಎಂ. ಕೃಷ್ಣ (ಮಾನ್ಯ ಮುಖ್ಯಮಂತ್ರಿ ಹಾಗೂ ಅರ್ಥಸಚಿವರು) : ಮಾನ್ಯ ಅಧ್ಯಕ್ಷರೆ, "2000 ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2000ದ ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿ ಹಾಗೂ ಅರ್ಥ ಸಚಿವರು) : ಮಾನ್ಯ ಅಧ್ಯಕ್ಷರೆ, "2000 ಕರ್ನಾಟಕ ಧನ ವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ii) ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕ, 2000)

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ.ಕೃಷ್ಣ (ಮಾನ್ಯ ಮುಖ್ಯಮಂತ್ರಿ ಹಾಗೂ ಅರ್ಥಸಚಿವರು) : ಮಾನ್ಯ ಅಧ್ಯಕ್ಷರೆ, "2000ದ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವವೇನೆಂದರೆ 2000ದ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿ ಹಾಗೂ ಅರ್ಥ ಸಚಿವರು) : ಮಾನ್ಯ ಅಧ್ಯಕ್ಷರೆ, 2000 ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಅನುಬಂಧ (ii) ರಲ್ಲಿ ವಿಧೇಯಕವನ್ನು ಮಂಡಿಸಲಾಗಿದೆ.

(iii) (ಕರ್ನಾಟಕ ಸ್ಟಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2000)

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ಸ್ಟಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ 2000. ಮಂಡಿಸಲು ಸಭೆಯ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2000ದ ಕರ್ನಾಟಕ ಸ್ಟಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."